# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ
ಅಂಜನಾಪುರ ಉಪ ವಿಭಾಗ
2ನೇ ಮುಖ್ಯ ರಸ್ತೆ, 6ನೇ ಅಡ್ಡರಸ್ತೆ, ಆರ್.ಬಿ.ಐ ಲೇಔಟ್, ಕೊತ್ತನೂರು ಮುಖ್ಯರಸ್ತೆ, ಬೆಂಗಳೂರು-560078

ಸಂಖ್ಯೆ : ಸ.ಕಾ.ಅ/ಅ.ಉ.ವಿ/ಪಿ.ಆರ್/ /2021-22 ದಿನಾಂಕ :

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿಬಿಎಂಪಿ ರವರ ಆದೇಶ ಸಂಖ್ಯೆ.ಬಿ(12)ಪಿಆರ್/35/2020-21 ದಿ:21.09.2020 ರವರ ಆದೇಶದಂತೆ ದಿ:20-08-2022 ರಂದು ವಾರ್ಡ್ ನಂ.195-ಕೋಣನಕುಂಟೆ ವಾರ್ಡ್ ಕಛೇರಿಯ ಉದ್ಯಾನವನದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

********

## ಸಭೆಗೆ ಹಾಜರಾಗಿದ್ದವರ ವಿವರಗಳು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಂಜನಾಪುರ ವಾರ್ಡ್ ಸಂಖ್ಯೆ.195ರಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಟಿ.ನಟರಾಜ ರವರು ದಿನಾಂಕ: 20-08-2022 ರಂದು ಶನಿವಾರ 11.30ಕ್ಕೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಸಮಿತಿಯ ಸದಸ್ಯರಿಗೆ ಶ್ರೀ ಕಾರ್ಯದರ್ಶಿ/ಸಹಾಯಕ ಅಭಿಯಂತರರು ಆದ ಶ್ರೀಮತಿ ಶಿಲ್ಪ.ಎನ್ ರವರು ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

## ಸಭೆಗೆ ಹಾಜರಾಗಿದ್ದವರ ಅಧಿಕಾರಿ/ಸಿಬ್ಬಂದಿಗಳ ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ ಟಿ.ನಟರಾಜ | ನೋಡಲ್ ಅಧಿಕಾರಿ | ಹಾಜರಿರುತ್ತಾರೆ. |
| 2 | ಶ್ರೀಮತಿ ಶಿಲ್ಪ.ಎನ್ | ಸದಸ್ಯ ಕಾರ್ಯದರ್ಶಿ/ಸಹಾಯಕ ಅಭಿಯಂತರರು | ಹಾಜರಿರುತ್ತಾರೆ. |
| 3 | ಶ್ರೀ ರಮೇಶ್.ಎಸ್.ಆರ್ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಗೈರು ಹಾಜರಿರುತ್ತಾರೆ |
| 4 | ಶ್ರೀ ಮೋಹನ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 5 | ಶ್ರೀ ರಮೇಶ್ | ಸಹಾಯಕ ಅಭಿಯಂತರರು (ಬೆಸ್ಕಾಂ) | ಗೈರು ಹಾಜರಿರುತ್ತಾರೆ |
| 6 | ಶ್ರೀ ರಂಗಪ್ಪ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಗೈರು ಹಾಜರಿರುತ್ತಾರೆ |
| 8 | ಶ್ರೀ ರಾಮಚಂದ್ರ | ಟ್ಯಾಕ್ಸ್ ಇನ್ಸ್‌ಪೆಕ್ಟರ್ | ಹಾಜರಿರುತ್ತಾರೆ. |
| 9 | ಶ್ರೀ ಜಗದೀಶ್ | ಬೀದಿ ದೀಪಗಳ ನಿರ್ವಹಣೆ | ಗೈರು ಹಾಜರಿರುತ್ತಾರೆ. |

## ಸಭೆಗೆ ಹಾಜರಾಗಿದ್ದವರ ಬಡಾವಣೆಗಳ ಕ್ಷೇಮಾಭಿವೃದ್ಧಿ ಸಂಘ/ಸಾರ್ವಜನಿಕರು ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಬಡಾವಣೆಗಳ ಕ್ಷೇಮಾಭಿವೃದ್ಧಿ ಸಂಘ | ಹಾಜರಾತಿ |
|---|---|---|---|
| 1 | ಶ್ರೀ ಸದಾಶಿವ | ಕೊತ್ತನೂರು ಗ್ರಾಮ RWA | ಹಾಜರಿರುತ್ತಾರೆ. |
| 2 | ಶ್ರೀ ಉಮೇಶ್ | | ಹಾಜರಿರುತ್ತಾರೆ. |
| 3 | ಶ್ರೀ ಪ್ರಕಾಶ್.ಎನ್.ಎಸ್ | | ಹಾಜರಿರುತ್ತಾರೆ. |
| 4 | ಡಾ॥ ವಿಜಯ ಕಿರಣ್ | | ಹಾಜರಿರುತ್ತಾರೆ. |
| 5 | ಕುಮಾರಿ | | ಹಾಜರಿರುತ್ತಾರೆ. |
| 6 | ಶ್ರೀ ರವಿ | | ಹಾಜರಿರುತ್ತಾರೆ. |
| 7 | ಶ್ರೀ ಶಿವಕುಮಾರ್ | ಬೀರೇಶ್ವರನಗರ RWA | ಹಾಜರಿರುತ್ತಾರೆ. |

ಮು.ತಿ.ನೋ 2ಕ್ಕೆ

Scanned with CamScanner

1. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ)

ವಾರ್ಡ್ ವ್ಯಾಪ್ತಿಯಲ್ಲಿ ಸಮರ್ಪಕವಾಗಿ ಘನತ್ಯಾಜ್ಯ ನಿರ್ವಹಣೆ ಮಾಡಲಾಗುತ್ತಿದ್ದು ನಿರ್ಲಕ್ಷ್ಯವಾಗಿರುವುದು, ಹಾಗೂ ಕ್ರಿಮಿನಾಶಕ ಔಷಧಿಯನ್ನು ಸಿಂಪಡಣೆ ಮಾಡುವ ಕಾರ್ಯಕ್ರಮ ಕೈಗೊಳ್ಳಲು ಕೋರಲಾಗಿರುತ್ತದೆ.

ಈ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ಬೊಮ್ಮನಹಳ್ಳಿ ವಲಯ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

2. ಸಹಾಯಕ ಕಾರ್ಯಪಾಲಕ ಅಭಿಯಂತರರು (ಮಳೆ ನೀರುಗಾಲುವೆ ನಿರ್ವಹಣೆ):-

ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಾಜಕಾಲುವೆಯಲ್ಲಿನ ಹೂಳು ಹಾಗೂ ಗಿಡ ಗಂಟಿಗಳನ್ನು ತೆರವುಗೊಳಿಸಲು ಕೋರಿರುತ್ತಾರೆ.

3. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ಇಲಾಖೆ:-

ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆಯಿಂದ ಅಂತರ್ಗತ ಕೇಬಲ್ ಅಳವಡಿಸಲು ರಸ್ತೆಯನ್ನು ಕೇವಲ ಪಿಟ್ ಅಗೆಯಬೇಕಾಗಿದ್ದು ಆದರೆ ರಸ್ತೆಯ ಉದ್ದಕ್ಕೂ ಸಹ ಅಗೆಯುತ್ತಿದ್ದು ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯಾಗುತ್ತಿರುವತ್ತದೆ ಆದ್ದರಿಂದ ಸದರಿ ರಸ್ತೆ ಅಗೆತಗಳನ್ನು ಮುಚ್ಚಿ ಪೆಟ್ ಬಿನ್ಸ್ ಅಳವಡಿಸಲು ಕೋರಿರುತ್ತಾರೆ.

4. ಸಹಾಯಕ ಕಾರ್ಯಪಾಲಕ ಅಭಿಯಂತರರು (ಕಾಮಗಾರಿ) ಇಲಾಖೆ:-

ವಾರ್ಡ್ ವ್ಯಾಪ್ತಿಯಲ್ಲಿ ಶ್ರೇಯಸ್ ಕಾಲೋನಿ, ಆರ್.ಬಿ.ಐ ಬಡಾವಣೆ, ಕೊತ್ತನೂರು, ನವೋದಯನಗರ ಸುತ್ತ ಮುತ್ತಲಿನ ಪ್ರದೇಶದ ಪಾದಚಾರಿ ಮಾರ್ಗದಲ್ಲಿನ ಮಣ್ಣನ್ನು ತೆರವುಗೊಳಿಸಲು ಕೋರಿರುತ್ತಾರೆ. ಕೊತ್ತನೂರು ಮುಖ್ಯ ರಸ್ತೆಯಲ್ಲಿನ ಮಳೆ ನೀರು ಚರಂಡಿಯಲ್ಲಿನ ಹೂಳನ್ನು ತೆರವುಗೊಳಿಸಲು ಕೋರಿರುತ್ತಾರೆ.

5.ನೋಡಲ್ ಅಧಿಕಾರಿ:-

ಅದರಂತೆ ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕ್ಷರಾದ ಶ್ರೀ ಟಿ.ನಟರಾಜ ರವರು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಆದ್ಯತೆ ಮೇರೆಗೆ ಸೂಕ್ತ ಕ್ರಮ ಜರುಗಿಸಲಾಗುವುದಾಗಿ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

-ಸಹಿ-
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.195 ಕೋಣನಕುಂಟೆ

-ಸಹಿ-
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ.195 ಕೋಣನಕುಂಟೆ

Scanned with CamScanner